9. ಶಾಸನ ರಚನೆ

ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2000 ಪರ್ಯಾಲೋಚನಾ ಪ್ರಸ್ತಾವ.

ಶ್ರೀ ಡಿ.ಕೆ.ಶಿವಕುಮಾರ್(ಸಹಕಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2000ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2000ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 6 ರವರೆಗೆ:

ಅಧ್ಯಕ್ಷರು: ಖಂಡ 2 ರಿಂದ 6ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 6 ರ ವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಕೆ.ಶಿವಕುಮಾರ್(ಸಹಕಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2000ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾಪ ಏನೆಂದರೆ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2000ನೇ ಇಸವಿಯ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು: ಈಗ ಸಭೆಯು ಮುಕ್ತಾಯವಾಗಿ ನಾಳೆ ಬೆಳಿಗ್ಗೆ ಗಂಟೆಗೆ ಸೇರುವುದು.

(ಸದನವು ಸಂಜೆ 7 ಗಂಟೆ 18 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 27-04-2000ದ ಗುರುವಾರ ಬೆಳಿಗ್ಗೆ 10 ಗಂಟೆಗೆ ಸೇರಲು ನಿಶ್ಚಯಿಸಿತು)

+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.

ಮುದ್ರಕರು: ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳು,
ಸಶಾಮು. ತುಮಕೂರು, ಕಾಸೂ. 63 - 350 ಪುಸ್ತಕಗಳು ದಿ: 29-11-2001